# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, (ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ಕುಡಿಯು ನೀರಿನ ಯೋಜನೆ), ಶಿರಾ ಕಚೇರಿಯನ್ನು ಪೂರಕ ಸಿಬ್ಬಂದಿ ಹುದ್ದೆಗಳೊಂದಿಗೆ ದಿನಾಂಕ 1-4-2015 ರಿಂದ 31-03-2016 ರವರೆಗೆ ಮುಂದುವರೆಸುವ ಬಗ್ಗೆ.

**ಓದಲಾಗಿದೆ.**

1. ಜಲಸಂಪನ್ಮೂಲ ಇಲಾಖೆಯ ಆದೇಶ ಸಂಖ್ಯೆ ಜಸಂಇ 04 ಸೇಎಸು 2010 ದಿನಾಂಕ 05-03-2010 ಮತ್ತು 10-03-2010

2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 10 ಜಿಪಅ 2010, ದಿನಾಂಕ. 07-04-2010.

3. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 294 ಜಿಪಅ 2014 ದಿನಾಂಕ 28-11-2014

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಸಂಖ್ಯೆ. ತುಜಿಪಂ/ಆಡಳಿತ(7)ಇಂ/ ವಿವ-03/2015-16, ದಿನಾಂಕ. 12-05-2015.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 5-3-2014ರ ಆದೇಶದಲ್ಲಿ ಜಲಸಂಪನ್ಮೂಲ ಇಲಾಖೆಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಗೆ ವರ್ಗಾಯಿಸಿರುವ ನಂ.33, ಹೆಚ್.ಎಲ್.ಬಿ.ಸಿ. ಉಪ ವಿಭಾಗ, ಬಸರಾಳು ಕಚೇರಿಯನ್ನು ಪೂರಕ ಸಿಬ್ಬಂದಿಯೊಂದಿಗೆ ತುಮಕೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿನ ಶಿರಾ ಪಟ್ಟಣದಲ್ಲಿ ಸ್ಥಾಪಿಸಿ ಕೆಳಕಂಡ ಪೂರಕ ಸಿಬ್ಬಂದಿ ಹುದ್ದೆಗಳ ಸಮೇತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ (ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ಕುಡಿಯುವ ನೀರಿನ ಯೋಜನೆ), ಶಿರಾ ಎಂದು ಮರುನಾಮಕರಣಗೊಳಿಸಿ ಎರಡು ವರ್ಷಗಳ ಅವಧಿಗೆ ಹೊಸದಾಗಿ ಕಚೇರಿಯನ್ನು ತೆರೆಯಲು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 07-04-2010ರಲ್ಲಿ ಸರ್ಕಾರದ ಮಂಜೂರಾತಿ ನೀಡಲಾಗಿತ್ತು:-

| ಕ್ರಮ ಸಂಖ್ಯೆ | ಹುದ್ದೆಗಳ ವಿವರ | ಹುದ್ದೆಗಳ ಸಂಖ್ಯೆ. |
|---|---|---|
| 1. | ಸಹಾಯಕ ಕಾರ್ಯಪಾಲಕ ಇಂಜಿನಿಯರ್ | 1 |
| 2. | ಸಹಾಯಕ ಇಂಜಿನಿಯರ್ | 3 |
| 3. | ಕಿರಿಯ ಇಂಜಿನಿಯರ್ | 4 |
| 4. | ಪ್ರಥಮ ದರ್ಜೆ ರೆವಿನ್ಯೂ ಸರ್ವೆಯರ್ | 1 |
| 5. | ಪ್ರಥಮ ದರ್ಜೆ ಸಹಾಯಕ | 1 |
| 6. | ದ್ವಿತೀಯ ದರ್ಜೆ ಸಹಾಯಕ | 2 |
| 7. | ವಾಹನ ಚಾಲಕ | 1 |
| 8. | ಗ್ರೂಪ್ – ಡಿ (Peon) | 2 |
| 9. | ವಾಚ್‌ಮೆನ್ | 1 |
| | ಒಟ್ಟು: | **16** |

ತದನಂತರ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ. 28-11-2014ರ ಆದೇಶದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ (ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ಕುಡಿಯುವ ನೀರಿನ ಯೋಜನೆ), ಶಿರಾ ಕಚೇರಿ ಹಾಗೂ ಸದರಿ ಕಚೇರಿಗೆ ಮಂಜೂರಾದ ಅಧಿಕಾರಿ / ಸಿಬ್ಬಂದಿ ಹುದ್ದೆಗಳನ್ನು ದಿನಾಂಕ 01-04-2014 ರಿಂದ 31-03-2015ರವರೆಗೆ ಮುಂದುವರೆಸಲಾಗಿತ್ತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು ಇವರು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 12-05-2015ರ ಪತ್ರದ ಜೊತೆ ಪ್ರಸ್ತಾವನೆ ಸಲ್ಲಿಸಿ, ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ 32 ಕಿ.ಮೀ. ಪೂರಕ ಕಾಲುವೆ ಪೂರ್ಣಗೊಂಡಿಲ್ಲವೆಂದು ಮತ್ತು ಹೊಸದಾಗಿ ತುಮಕೂರು ಜಿಲ್ಲೆ ಶಿರಾ ತಾಲ್ಲೂಕಿಗೆ ತಾವರೆಕೆರೆ ಮತ್ತು ಇತರೆ 64 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಯನ್ನು ಹೊಸದಾಗಿ ಅನುಷ್ಠಾನಗೊಳಿಸಲು ಮುಖ್ಯ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ವಹಿಸಿದ್ದು, ಸದರಿ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಪೂರ್ಣಗೊಳಿಸಲು ಇನ್ನೂ ಕಾಲಾವಕಾಶ ಬೇಕಾಗಿರುತ್ತದೆ ಎಂದು, ಆದ್ದರಿಂದ ಸದರಿ ಕಚೇರಿಯನ್ನು ದಿನಾಂಕ 1-4-2015 ರಿಂದ 31-03-2016 ರವರೆಗೆ ಮುಂದುವರೆಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸುವ ಸಲುವಾಗಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, (ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ಕುಡಿಯುವ ನೀರಿನ ಯೋಜನೆ), ಶಿರಾ ಕಚೇರಿಯನ್ನು ದಿನಾಂಕ 01-04-2015 ರಿಂದ 31-03-2016 ರವರೆಗೆ ಮುಂದುವರೆಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 80 ಜಿಪಅ 2015, ಬೆಂಗಳೂರು, ದಿನಾಂಕ. 14-09-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, (ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ಕುಡಿಯು ನೀರಿನ ಯೋಜನೆ), ಶಿರಾ ಕಚೇರಿ ಹಾಗೂ ಸದರಿ ಕಚೇರಿಗೆ ಮಂಜೂರಾದ ಕೆಳಕಂಡ ಅಧಿಕಾರಿ / ಸಿಬ್ಬಂದಿ ಹುದ್ದೆಗಳನ್ನು ದಿನಾಂಕ. 01-04-2015 ರಿಂದ 31-03-2016 ರವರೆಗೆ ಮುಂದುವರೆಸಿದೆ:-

| ಕ್ರಮ ಸಂಖ್ಯೆ | ಹುದ್ದೆಗಳ ವಿವರ | ಹುದ್ದೆಗಳ ಸಂಖ್ಯೆ |
|---|---|---|
| 1. | ಸಹಾಯಕ ಕಾರ್ಯಪಾಲಕ ಇಂಜಿನಿಯರ್ | 1 |
| 2. | ಸಹಾಯಕ ಇಂಜಿನಿಯರ್ | 3 |
| 3. | ಕಿರಿಯ ಇಂಜಿನಿಯರ್ | 4 |
| 4. | ಪ್ರಥಮ ದರ್ಜೆ ರೆವಿನ್ಯೂ ಸರ್ವೆಯರ್ | 1 |
| 5. | ಪ್ರಥಮ ದರ್ಜೆ ಸಹಾಯಕ | 1 |
| 6. | ದ್ವಿತೀಯ ದರ್ಜೆ ಸಹಾಯಕ | 2 |
| 7. | ವಾಹನ ಚಾಲಕ | 1 |
| 8. | ಗ್ರೂಪ್ – ಡಿ (Peon) | 2 |
| 9. | ವಾಚ್‌ಮೆನ್ | 1 |
| | ಒಟ್ಟು: | **16** |

---3

ಈ ಆದೇಶವನ್ನು ಜಲಸಂಪನ್ಮೂಲ ಇಲಾಖೆಯು ಟಿಪ್ಪಣಿ ಸಂಖ್ಯೆ ಜಸಂಇ 167 ಸೇಎಸು 2015 ದಿನಾಂಕ 13-08-2015ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ 10-07-1996ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೋತುಕಟ್ಟೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
6. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಧುಗಿರಿ.
7. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, (ಕಳ್ಳಂಬೆಳ್ಳ ಕೆರೆಯಿಂದ ಮದಲೂರು ಕೆರೆಗೆ ಕುಡಿಯು ನೀರಿನ ಯೋಜನೆ), ಶಿರಾ
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ)
9. ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ)
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
11. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
12. ರಕ್ಷಾ ಕಡತ / ~~ಮಾಹಿತಿ ಕೇಂದ್ರ~~/ ಹೆಚ್ಚುವರಿ ಪ್ರತಿಗಳು.